# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 811
ಸದಸ್ಯರ ಹೆಸರು : ಶ್ರೀ ಡಿ.ಎಸ್. ಅರುಣ್
ಉತ್ತರಿಸುವ ಸಚಿವರು : ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು
ಉತ್ತರಿಸುವ ದಿನಾಂಕ : 21.02.2024

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ರಾಜ್ಯಾದ್ಯಂತ ಹಳ್ಳಿಗಳಲ್ಲಿ ಬಸ್‌ಗಳ ಕೊರತೆಯಿಂದ ಜನ ಸಾಮಾನ್ಯರಿಗೆ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು; | **ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ**<br>ನಿಗಮದ ವ್ಯಾಪ್ತಿಯಲ್ಲಿನ 17 ಜಿಲ್ಲೆಗಳ ಕಾರ್ಯಾಚರಣೆ ವ್ಯಾಪ್ತಿಯಲ್ಲಿ ನಿಗಮದ ವ್ಯಾಪ್ತಿಯಲ್ಲಿ ಒಟ್ಟು 21748 ಗ್ರಾಮಗಳು ಇದ್ದು, ಇದರಲ್ಲಿ 19959 ಗ್ರಾಮಗಳಿಗೆ ಸಾರಿಗೆ ಸೌಲಭ್ಯವನ್ನು ಒದಗಿಸಲಾಗಿರುತ್ತದೆ ಹಾಗೂ 1790 ಗ್ರಾಮಗಳ ಸಮೀಪದ ಗ್ರಾಮಗಳವರೆಗೂ ಸಾರಿಗೆ ಸೌಲಭ್ಯ ಕಲ್ಪಿಸಲಾಗಿದೆ.<br><br>ಶಕ್ತಿ ಯೋಜನೆ ಜಾರಿಗೂ ಮೊದಲು 45255 ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿತ್ತು, ಶಕ್ತಿ ಯೋಜನೆ ಜಾರಿಯಾದ ನಂತರದಲ್ಲಿ ಒಟ್ಟು 7651 ಅನುಸೂಚಿಗಳಿಂದ 47752 ಸರತಿಗಳನ್ನು ಮಾಡಲಾಗುತ್ತಿದೆ. ಪ್ರತಿದಿನ 2497 ಹೆಚ್ಚುವರಿ ಸರತಿಗಳನ್ನು ಕಾರ್ಯಾಚರಣೆಯನ್ನು ಮಾಡಲಾಗುತ್ತಿದೆ. ಅಲ್ಲದೇ, 177 ಹೊಸ ಅನುಸೂಚಿಗಳನ್ನು ಪ್ರಾರಂಭಿಸಲಾಗಿದೆ.<br>**ನಿಗಮದಿಂದ ಕಳೆದ 04 ವರ್ಷಗಳಲ್ಲಿ ಹೊಸ ವಾಹನಗಳನ್ನು ಖರೀದಿಸಿರುವುದಿಲ್ಲ ಹಾಗೂ 07 ವರ್ಷಗಳಿಂದ ಸಿಬ್ಬಂದಿ ನೇಮಕಾತಿ ಆಗಿರುವುದಿಲ್ಲ.**<br>ಆದರೆ ಪ್ರಸಕ್ತ ಸಾಲಿನಲ್ಲಿ ಈ ಕೆಳಕಂಡ ಬಸ್ಸುಗಳನ್ನು ಖರೀದಿಸಲು/ ಜಿ.ಸಿ.ಸಿ ಆಧಾರದ ಮೇಲೆ ಕಾರ್ಯಾಚರಿಸಲು ಪ್ರಕ್ರಿಯೆ ಜಾರಿಯಲ್ಲಿರುತ್ತದೆ:<br>▪ ಸರ್ಕಾರದಿಂದ ನಿಗಮಕ್ಕೆ ವಿಶೇಷ ಬಂಡವಾಳ ನೆರವಿನಡಿ ಒದಗಿಸಿರುವ ರೂ.100.00 ಕೋಟಿಗಳ ಅನುದಾನದಲ್ಲಿ ಕರ್ನಾಟಕ ಸಾರಿಗೆ ಸಾಮಾನ್ಯ ಮಾದರಿಯ ಒಟ್ಟು 250 ಸಂಖ್ಯೆ ಹೊಸ ವಾಹನಗಳನ್ನು ಖರೀದಿಸಲು ಆಡಳಿತಾತ್ಮಕ ಅನುಮೋದನೆ ನೀಡಿ, ಮೊದಲನೇ ಕಂತಿನ ಅನುದಾನ ರೂ.6235.44 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದ್ದು, ಖರೀದಿ ಪ್ರಕ್ರಿಯೆ ಜಾರಿಯಲ್ಲಿರುತ್ತದೆ.<br>▪ 25 ಹೊಸ ಸಾಮಾನ್ಯ ಕರ್ನಾಟಕ ಸಾರಿಗೆ ಮಾದರಿ ಬಸ್ಸುಗಳ ಖರೀದಿ.<br>▪ 100 ಹೊಸ ಸಾಮಾನ್ಯ ಬಸ್ಸುಗಳ ಖರೀದಿ.<br>▪ 200 ಹೊಸ ಸಾಮಾನ್ಯ ಬಸ್ಸುಗಳ ಖರೀದಿ.<br>▪ 40 ಪಲ್ಲಕ್ಕಿ ನಾನ್-ಎ.ಸಿ. ಸ್ಲೀಪರ್ ಬಸ್ಸುಗಳ ಖರೀದಿ.<br>▪ 04 ಎ.ಸಿ. ಮತ್ತು 04 ನಾನ್-ಎ.ಸಿ. ಸ್ಲೀಪರ್ ಬಸ್ಸುಗಳ ಖರೀದಿ.<br>▪ 300 ಸಂಖ್ಯೆ ವಿದ್ಯುತ್ ಚಾಲಿತ ವಾಹನಗಳನ್ನು ಜಿ.ಸಿ.ಸಿ ಆಧಾರದಲ್ಲಿ ಕಾರ್ಯಾಚರಣೆ ಬಸ್ಸುಗಳ ಖರೀದಿ.<br>▪ 350 ಸಂಖ್ಯೆ ಸಾಮಾನ್ಯ ಬಸ್ಸುಗಳ ಖರೀದಿ.<br><br>ಪ್ರಸ್ತುತ, ನಿಗಮದಲ್ಲಿ ಖಾಲಿ ಇರುವ ಹುದ್ದೆಗಳಲ್ಲಿ 2000 ಚಾಲಕ-ಕಂ-ನಿರ್ವಾಹಕ ಹುದ್ದೆ ಹಾಗೂ 300 ತಾಂತ್ರಿಕ ಸಹಾಯಕ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಕ್ರಮ ವಹಿಸಲಾಗುತ್ತಿದೆ.<br>ಮೇಲಿನಂತೆ, ಹೊಸ ವಾಹನಗಳು ಸೇರ್ಪಡೆಯಾದ ನಂತರ ಹಾಗೂ ಸಿಬ್ಬಂದಿಗಳ ನೇಮಕಾತಿ ನಂತರ, ವಾಹನ ಮತ್ತು ಚಾಲನಾ ಸಿಬ್ಬಂದಿಗಳ ಲಭ್ಯತೆಗನುಗುಣವಾಗಿ ಹಂತಹಂತವಾಗಿ ಹೆಚ್ಚುವರಿ |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| | | ಸಾರಿಗೆ ಸೌಲಭ್ಯ ಒದಗಿಸುವ ಬಗ್ಗೆ ಪರಿಶೀಲಿಸಿ ಹಾಗೂ ವಿಭಾಗಗಳ ಅವಶ್ಯಕತೆಯನ್ನು ಪರಿಗಣಿಸಿ, ಹೊಸ ಬಸ್‌ಗಳನ್ನು ಒದಗಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುತ್ತದೆ<br><br>**<u>ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ</u>**<br>ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಿಂದ 25.0 ಕಿ.ಮೀ.ವರೆಗೆ ಕಾರ್ಯಾಚರಣೆ ವ್ಯಾಪ್ತಿಯನ್ನು ಹೊಂದಿರುತ್ತದೆ.<br><br>ಶಕ್ತಿ ಯೋಜನೆ ಜಾರಿಗೆ ಮೊದಲು ಸಂಸ್ಥೆಯಿಂದ 56,646 ಸುತ್ತುವಳಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿತ್ತು. ಶಕ್ತಿ ಯೋಜನೆ ಜಾರಿಯಾದ ನಂತರದಲ್ಲಿ 5,577 ಅನುಸೂಚಿ/ಬಸ್ಸುಗಳಿಂದ 57,772 ಸುತ್ತುವಳಿಗಳ ಮೂಲಕ 11.37 ಲಕ್ಷ ಕಿ.ಮೀ ಕ್ರಮಿಸುವ ಮೂಲಕ ಸಾರಿಗೆ ಸೌಲಭ್ಯ ಕಲ್ಪಿಸಲಾಗುತ್ತಿದೆ. ಪ್ರತಿದಿನ 1126 ಹೆಚ್ಚುವರಿ ಸುತ್ತುವಳಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ.<br><br>ಮುಂದುವರೆದು, ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯು ಈಗಾಗಲೇ ಕಾರ್ಯಾಚರಣೆ ವ್ಯಾಪ್ತಿಗೆ ಬರುವ ಹಾಗೂ ಬಸ್ಸುಗಳ ಸಂಚಾರಕ್ಕೆ ಯೋಗ್ಯ ರಸ್ತೆಗಳಿರುವ ಎಲ್ಲಾ ಪ್ರದೇಶಗಳಿಗೂ ಅವಶ್ಯಕತೆಗನುಗುಣವಾಗಿ ಸಾರಿಗೆ ಸೌಲಭ್ಯವನ್ನು ಒದಗಿಸಿದೆ.<br><br>ಪ್ರಸಕ್ತ ಸಾಲಿನಲ್ಲಿ ಈ ಕೆಳಕಂಡ ಬಸ್ಸುಗಳನ್ನು ಖರೀದಿಸಲು ಪ್ರಕ್ರಿಯೆ ಜಾರಿಯಲ್ಲಿರುತ್ತದೆ:<br>▪ 840 ಬಿ.ಎಸ್-6 ಡೀಸೆಲ್ ಬಸ್<br>▪ 921 ಎಲೆಕ್ಟ್ರಿಕ್ ಬಸ್(ಜಿಸಿಸಿ)<br>▪ 100 ಫೀಡರ್ ಸರ್ವಿಸ್ (ಜಿಸಿಸಿ)<br>▪ 20 ಚಿಕ್ಕ ಬಸ್ (ಫೀಡರ್ ಸರ್ವಿಸ್)<br>▪ 05 ಡಬಲ್ ಡೆಕ್ಕರ್ ಬಸ್ ಹವಾನಿಯಂತ್ರಿತ (NCAP)<br>▪ 05 ಡಬಲ್ ಡೆಕ್ಕರ್ ಬಸ್ ಹವಾನಿಯಂತ್ರಿತ (DULT)<br>▪ ಸರ್ಕಾರದಿಂದ ಸಂಸ್ಥೆಗೆ ವಿಶೇಷ ಬಂಡವಾಳ ನೆರವಿನಡಿ ಒದಗಿಸಿರುವ ರೂ.150.00 ಕೋಟಿಗಳ ಅನುದಾನದಲ್ಲಿ 320 ಹವಾನಿಯಂತ್ರಿತ ಎಲೆಕ್ಟ್ರಿಕ್ ಬಸ್‌ಗಳನ್ನು ಕಾರ್ಯಾಚರಿಸಲು ಆಡಳಿತಾತ್ಮಕ ಅನುಮೋದನೆ ನೀಡಿ, ಮೊದಲನೇ ಕಂತಿನ ಅನುದಾನ ರೂ. 9353.16 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದ್ದು, ಟೆಂಡರ್ ಪ್ರಕ್ರಿಯೆ ಜಾರಿಯಲ್ಲಿರುತ್ತದೆ.<br>**ಸಂಸ್ಥೆಯಲ್ಲಿ ಕಳೆದ 04 ವರ್ಷಗಳಲ್ಲಿ ನೇಮಕಾತಿ ಮಾಡಿಕೊಂಡಿರುವುದಿಲ್ಲ.**<br>ಆದರೆ 2023-24ನೇ ಸಾಲಿನಲ್ಲಿ ಪ್ರಸ್ತುತ 2500 ನಿರ್ವಾಹಕರ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಅಧಿಸೂಚನೆ ಹೊರಡಿಸುವ ಕಾರ್ಯವು ಪ್ರಗತಿಯಲ್ಲಿರುತ್ತದೆ.<br><br>**<u>ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ</u>**<br>ಸಂಸ್ಥೆಯ ವ್ಯಾಪ್ತಿಯಲ್ಲಿ 06 ಜಿಲ್ಲೆಗಳು ಬರುತ್ತವೆ. ಸದರಿ ಕಾರ್ಯಾಚರಣೆ ವ್ಯಾಪ್ತಿಯಲ್ಲಿ ಒಟ್ಟು 4610 ಗ್ರಾಮಗಳು ಇದ್ದು, ಇದರಲ್ಲಿ 4565 ಗ್ರಾಮಗಳಿಗೆ ಸಾರಿಗೆ ಸೌಲಭ್ಯವನ್ನು ಒದಗಿಸಲಾಗಿರುತ್ತದೆ ಹಾಗೂ 45 ಗ್ರಾಮಗಳ ಸಮೀಪದ ಗ್ರಾಮಗಳವರೆಗೂ ಸಾರಿಗೆ ಸೌಲಭ್ಯ ಕಲ್ಪಿಸಲಾಗಿದೆ. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| | | ಸಂಸ್ಥೆಯ ವ್ಯಾಪ್ತಿಯಲ್ಲಿ ಒಟ್ಟು 4574 ಅನುಸೂಚಿಗಳಿಂದ ಶಕ್ತಿ ಯೋಜನೆ ಜಾರಿಗೂ ಮೊದಲು 34676 ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿತ್ತು. ಶಕ್ತಿ ಯೋಜನೆ ಜಾರಿ ನಂತರದಲ್ಲಿ 35790 ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ. ಪ್ರತಿ ದಿನ 1114 ಹೆಚ್ಚುವರಿ ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ.<br><br>ಜೂನ್-23ರ ನಂತರದ ಅವಧಿಯಲ್ಲಿ ಸಂಸ್ಥೆಯಲ್ಲಿ ಕಾರ್ಯಾಚರಣೆಯಲ್ಲಿದ್ದ 124 ಅಂತರರಾಜ್ಯ ಸಾರಿಗೆಗಳನ್ನು ಪರಿಷ್ಕರಿಸಿ ಸದರಿ ಅನುಸೂಚಿಗಳನ್ನು ರಾಜ್ಯದೊಳಗೆ ಕಾರ್ಯಾಚರಣೆಗೆ ಬಳಸಿಕೊಂಡು ಶಾಲಾ ವಿದ್ಯಾರ್ಥಿಗಳಿಗೆ/ ಸಾರ್ವಜನಿಕರಿಗೆ ಅನುಕೂಲವಾಗುವಂತೆ ಕಾರ್ಯಾಚರಣೆ ಮಾಡಲಾಗುತ್ತಿದೆ.<br>**ಸಂಸ್ಥೆಯಿಂದ ಕಳೆದ 04 ವರ್ಷಗಳಲ್ಲಿ ಹೊಸ ವಾಹನಗಳನ್ನು ಖರೀದಿಸಿರುವುದಿಲ್ಲ ಮತ್ತು ನೇಮಕಾತಿ ಆಗಿರುವುದಿಲ್ಲ.**<br>ಆದರೆ ಪ್ರಸಕ್ತ ಸಾಲಿನಲ್ಲಿ ಸಾರಿಗೆ ಸೌಲಭ್ಯಗಳ ಕೊರತೆಯನ್ನು ನೀಗಿಸಲು ಈ ಕೆಳಗಿನಂತೆ ಕ್ರಮ ಕೈಗೊಳ್ಳಲಾಗುತ್ತಿದೆ:-<br>▪ 50 ಗ್ರಾಮಾಂತರ ಸಾರಿಗೆ ಬಸ್ಸುಗಳ ಖರೀದಿ.<br>▪ ಗ್ರಾಮಾಂತರ ಸಾರಿಗೆಯ 285 ಹೊಸ ಬಸ್ಸುಗಳ ಖರೀದಿ.<br>▪ ಸರ್ಕಾರದಿಂದ ಸಂಸ್ಥೆಗೆ ವಿಶೇಷ ಬಂಡವಾಳ ನೆರವಿನಡಿ ಒದಗಿಸಿರುವ ರೂ.150.00 ಕೋಟಿಗಳ ಅನುದಾನ ಸುಮಾರು 375 ಸಂಖ್ಯೆ ಗ್ರಾಮಾಂತರ ಸಾರಿಗೆಗಳನ್ನು ಖರೀದಿಸಲು ಆಡಳಿತಾತ್ಮಕ ಅನುಮೋದನೆ ನೀಡಿ, ಮೊದಲನೇ ಕಂತಿನ ಅನುದಾನ ರೂ.9353.16 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದ್ದು, ಖರೀದಿ ಪ್ರಕ್ರಿಯೆ ಜಾರಿಯಲ್ಲಿರುತ್ತದೆ.<br>▪ ಡಲ್ಟ್ ಆರ್ಥಿಕ ಸಹಾಯದಿಂದ 100 ನಗರ ಸಾರಿಗೆ ಬಸ್ಸುಗಳ ಖರೀದಿ.<br>▪ 20-ನಾನ್ ಎ/ಸಿ ಸ್ಲೀಪರ್ ಹಾಗೂ 04-ಎ/ಸಿ ಸ್ಲೀಪರ್ ಬಸ್ಸುಗಳ ಖರೀದಿ.<br><br>ಸಂಸ್ಥೆಯಲ್ಲಿ ಪ್ರಸ್ತುತ 2000 ಚಾಲಕ-ಕಂ-ನಿರ್ವಾಹಕ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಕ್ರಮ ವಹಿಸಲಾಗುತ್ತಿದೆ.<br>**<u>ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ</u>**<br>ನಿಗಮದ ವ್ಯಾಪ್ತಿಯ ಜಿಲ್ಲೆಗಳಿಗೆ ಹೊಂದಿಕೊಂಡಿರುವ ಗಡಿಭಾಗದಲ್ಲಿರುವ ಮತ್ತು ಗಡಿಭಾಗದ ಸಮೀಪದ ಗ್ರಾಮಗಳಲ್ಲಿ ವಾಸಿಸುವ ಮಹಿಳೆಯರು/ ವಿದ್ಯಾರ್ಥಿನಿಯರ ಅನುಕೂಲಕ್ಕಾಗಿ ಪರ್ಯಾಯ ವ್ಯವಸ್ಥೆಯಿಲ್ಲದ ಕೆಲವು ಆಯ್ದ ಏಕ ಮಾರ್ಗ (Solitary routes) ಅಂತರರಾಜ್ಯ ಸಾರಿಗೆಗಳಲ್ಲಿ (213 ಅನುಸೂಚಿಗಳಲ್ಲಿ 811 ಸುತ್ತುವಳಿಗಳು) ಮಾತ್ರ ರಾಜ್ಯದ ಗಡಿಭಾಗದ ವರೆಗೆ (ಕರ್ನಾಟಕ ರಾಜ್ಯದ ಒಳಗಡೆ ಮಾತ್ರ) ಉಚಿತವಾಗಿ ಪ್ರಯಾಣಿಸಲು ಅವಕಾಶ ಕಲ್ಪಿಸಲಾಗಿರುತ್ತದೆ.<br>ನಿಗಮದ ವ್ಯಾಪ್ತಿಯ ಒಟ್ಟು 5283 ಜನವಸತಿ ಗ್ರಾಮಗಳ ಪೈಕಿ 5251 ಗ್ರಾಮಗಳಿಗೆ ಸಾರಿಗೆ ಸೌಲಭ್ಯವನ್ನು ಕಲ್ಪಿಸಲಾಗಿರುತ್ತದೆ. ಉಳಿದ 32 ಗ್ರಾಮಗಳ ಸಮೀಪದ ಗ್ರಾಮಗಳವರೆಗೂ ಸಾರಿಗೆ ಸೌಲಭ್ಯ ಕಲ್ಪಿಸಲಾಗಿದೆ.<br>ಶಕ್ತಿ ಯೋಜನೆ ಜಾರಿಗೂ ಮೊದಲು ಒಟ್ಟು 4028 ಅನುಸೂಚಿಗಳಿಂದ 22214 ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿತ್ತು. ಯೋಜನೆ ಜಾರಿಯಾದ ನಂತರ ಒಟ್ಟು 4443 ಅನುಸೂಚಿಗಳಿಂದ 24744 ಸರತಿಗಳನ್ನು ಕಾರ್ಯಾಚರಣೆ |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| | | ಮಾಡಲಾಗುತ್ತಿದೆ. 415 ಅನುಸೂಚಿಗಳನ್ನು ಹೆಚ್ಚಿಗೆ ಹಾಗೂ ಪ್ರತಿದಿನ 2530 ಹೆಚ್ಚುವರಿ ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ.<br>ರಾಜ್ಯಾದ್ಯಂತ ಗ್ರಾಮೀಣ ಭಾಗದಲ್ಲಿ ವಿದ್ಯಾರ್ಥಿಗಳು ಸೇರಿದಂತೆ ಸಾರ್ವಜನಿಕರ ಸಂಖ್ಯೆ ಪ್ರತಿ ವರ್ಷ ಹೆಚ್ಚಾಗುತ್ತಿದ್ದು, ಅದರಲ್ಲೂ ಮಹಿಳೆಯರಿಗೆ ಉಚಿತ ಸಾರಿಗೆ ವ್ಯವಸ್ಥೆ ಕಲ್ಪಿಸಿರುವುದರಿಂದ ಸರ್ಕಾರಿ ಬಸ್‌ಗಳಲ್ಲಿ ಸಂಚರಿಸುವವರ ಸಂಖ್ಯೆ ಗಣನೀಯವಾಗಿ ಹೆಚ್ಚಾಗಿರುತ್ತದೆ. ಈ ಸಂಬಂಧ ಶಾಲಾ-ಕಾಲೇಜು ವಿದ್ಯಾರ್ಥಿಗಳಿಗೆ ಸಮರ್ಪಕ ಸಾರಿಗೆ ಸೌಲಭ್ಯವನ್ನು ಕಲ್ಪಿಸುವ ನಿಟ್ಟಿನಲ್ಲಿ ಆಯಾ ತಾಲ್ಲೂಕು ವ್ಯಾಪ್ತಿಯ ಶಾಲಾ-ಕಾಲೇಜು ಮುಖ್ಯೋಪಾಧ್ಯಾಯರು/ ಪ್ರಾಂಶುಪಾಲರು/ಕ್ಷೇತ್ರ ಶಿಕ್ಷಣಾಧಿಕಾರಿಗಳ ಸಭೆಯನ್ನು ಏರ್ಪಡಿಸಿ, ಮನವಿಗಳನ್ನು ಪಡೆದುಕೊಂಡು ಬೇಡಿಕೆಗೆ ಅನುಗುಣವಾಗಿ ಹೆಚ್ಚುವರಿ ಸರತಿಗಳನ್ನು ಅಳವಡಿಸಲು ಕ್ರಮ ವಹಿಸಲಾಗುತ್ತಿದೆ.<br>ಸಾರ್ವಜನಿಕ ಪ್ರಯಾಣಿಕರು ಹಾಗೂ ಶಾಲಾ-ಕಾಲೇಜು ವಿದ್ಯಾರ್ಥಿಗಳ ಬೇಡಿಕೆ/ಅವಶ್ಯಕತೆಗನುಗುಣವಾಗಿ ಸಾರಿಗೆ ಸೌಲಭ್ಯವನ್ನು ಕಲ್ಪಿಸಲಾಗಿದ್ದು, ಸಾರ್ವಜನಿಕರು ಹಾಗೂ ಶಾಲಾ-ಕಾಲೇಜು ವಿದ್ಯಾರ್ಥಿಗಳು ಸದರಿ ಸಾರಿಗೆಗಳ ಸದುಪಯೋಗವನ್ನು ಪಡೆದುಕೊಳ್ಳುತ್ತಿದ್ದಾರೆ.<br>**ನಿಗಮದಿಂದ ಕಳೆದ 04 ವರ್ಷಗಳಲ್ಲಿ ಹೊಸ ವಾಹನಗಳನ್ನು ಖರೀದಿಸಿರುವುದಿಲ್ಲ ಹಾಗೂ ನೇಮಕಾತಿ ಆಗಿರುವುದಿಲ್ಲ.**<br>**ಆದರೆ** ಪ್ರಸಕ್ತ ಸಾಲಿನಲ್ಲಿ ಸಾರಿಗೆ ಸೌಲಭ್ಯಗಳ ಕೊರತೆಯನ್ನು ನೀಗಿಸಲು ಈ ಕೆಳಗಿನಂತೆ ಕ್ರಮ ಕೈಗೊಳ್ಳಲಾಗುತ್ತಿದೆ:-<br>• ಸರ್ಕಾರದಿಂದ ನಿಗಮಕ್ಕೆ ವಿಶೇಷ ಬಂಡವಾಳ ನೆರವಿನಡಿ ಒದಗಿಸಿರುವ ರೂ.100.00 ಕೋಟಿಗಳ ಅನುದಾನದಲ್ಲಿ ಪೂರ್ಣ ಕವಚ ನಿರ್ಮಿತ 250 ವೇಗದೂತ ಸಾರಿಗೆಗಳನ್ನು ಖರೀದಿಸಲು ಖರೀದಿಸಲು ಆಡಳಿತಾತ್ಮಕ ಅನುಮೋದನೆ ನೀಡಿ, ಮೊದಲನೇ ಕಂತಿನ ಅನುದಾನ ರೂ.6235.44 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದ್ದು, ಖರೀದಿ ಪ್ರಕ್ರಿಯೆ ಜಾರಿಯಲ್ಲಿರುತ್ತದೆ.<br>• ಪೂರ್ಣ ಕವಚ ನಿರ್ಮಿತ 123 ನಗರ ಸಾರಿಗೆ ಬಸ್ಸುಗಳನ್ನು ಡಲ್ಟ್ ಆರ್ಥಿಕ ಸಹಾಯದಿಂದ ಖರೀದಿಸಲು ಮಂಜೂರಾತಿ ದೊರೆತಿದ್ದು, ಖರೀದಿ ಪ್ರಕ್ರಿಯೆ ಜಾರಿಯಲ್ಲಿರುತ್ತದೆ.<br>• 06 ವೋಲ್ವೋ ಎ.ಸಿ. ಸ್ಲೀಪರ್ ಕೋಚ್, 02 ಎ.ಸಿ. ಸ್ಲೀಪರ್ ಕೋಚ್, 14 ನಾನ್-ಎ.ಸಿ. ಸ್ಲೀಪರ್ ಕೋಚ್ ಮತ್ತು 612 ಗ್ರಾಮಾಂತರ ಸಾರಿಗೆ ಬಸ್‌ಗಳನ್ನು ಖರೀದಿಸಲಾಗಿದೆ.<br><br>ನಿಗಮದಲ್ಲಿ 925-ಚಾಲಕ ಮತ್ತು 694-ಚಾಲಕ-ಕಂ-ನಿರ್ವಾಹಕ ಹುದ್ದೆಗಳು ಸೇರಿದಂತೆ ಒಟ್ಟು 1619 ಚಾಲನಾ ಹುದ್ದೆಗಳ ನೇಮಕಾತಿಗೆ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗಿದ್ದು, ಆಯ್ಕೆ ಪಟ್ಟಿಗೆ ಆಕ್ಷೇಪಣೆಗಳನ್ನು ಸಲ್ಲಿಸಲು ಅವಕಾಶ ನೀಡಲಾಗಿರುತ್ತದೆ. ಶೀಘ್ರವೇ ಅಂತಿಮ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗುವುದು.<br>300-ನಿರ್ವಾಹಕ ಮತ್ತು 15-ಸಹಾಯಕ ಲೆಕ್ಕಿಗ ಹುದ್ದೆಗಳ ನೇರ ನೇಮಕಾತಿಗಾಗಿ ಜಾಹೀರಾತು ಹೊರಡಿಸಲು ಕ್ರಮ ಜರುಗಿಸಲಾಗುತ್ತಿದೆ.<br>ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ 36-ಹಿಂಬಾಕಿ ಹುದ್ದೆಗಳ ನೇರ ನೇಮಕಾತಿಗೆ ಜಾಹೀರಾತು ಅಧಿಸೂಚನೆ |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| | | ಹೊರಡಿಸಲಾಗಿದೆ ಹಾಗೂ 51-ಗಣಕ ಸಹಾಯಕ ಮತ್ತು 08-ಅಂಕಿಅಂಶ ಸಹಾಯಕ ಹುದ್ದೆಗಳನ್ನು ಹೊರಗುತ್ತಿಗೆ ಮೂಲಕ ಭರ್ತಿ ಮಾಡಿಕೊಳ್ಳುವ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ. |
| ಆ. | ರಾಜ್ಯದ ಬಸ್ ನಿಲ್ದಾಣದಲ್ಲಿ ಮೂಲಭೂತ ಸೌಕರ್ಯ (ಸ್ವಚ್ಛತೆ ಹಾಗೂ ಶೌಚಾಲಯ) ಇಲ್ಲದೆ ಪ್ರಯಾಣಿಕರಿಗೆ ಆಗುತ್ತಿರುವ ತೊಂದರೆ ಸರ್ಕಾರದ ಗಮನಕ್ಕೆ ಬಂದಿದೆಯೇ; | **ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ**<br>ಬಸ್ ನಿಲ್ದಾಣಗಳಲ್ಲಿ ಶೌಚಾಲಯ ಹಾಗೂ ರಸ್ತೆಗಳ ನಿರ್ವಹಣೆ ಸೇರಿದಂತೆ ಅಗತ್ಯ ಮೂಲಭೂತ ಸೌಲಭ್ಯ ಕಲ್ಪಿಸಲು ಸರ್ಕಾರ ಆದ್ಯತೆ ನೀಡಿದೆ ಹಾಗೂ ಸದರಿ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಸರ್ಕಾರದ ಬಂಡವಾಳ ವೆಚ್ಚದ ಯೋಜನೆಯಡಿಯಲ್ಲಿ 2023-24ನೇ ಸಾಲಿನ ಆಯವ್ಯಯದಲ್ಲಿ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗಾಗಿ ರೂ.40.00 ಕೋಟಿಗಳ ಅನುದಾನವನ್ನು ನಿಗದಿಪಡಿಸಲಾಗಿರುತ್ತದೆ. |
| ಇ. | ಬಸ್ ನಿಲ್ದಾಣಗಳಲ್ಲಿ ಮೂಲಭೂತ ಸೌಕರ್ಯಕ್ಕೆ ಸರ್ಕಾರ ಎಷ್ಟು ಹಣ ಮಂಜೂರು ಮಾಡಿದೆ? (ವಿವರ ನೀಡುವುದು) | **ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ**<br>ಸಂಸ್ಥೆಯಲ್ಲಿ ಸಾರ್ವಜನಿಕರ ಅನುಕೂಲಕ್ಕಾಗಿ ಸುಸಜ್ಜಿತವಾದ ಬಸ್ ನಿಲ್ದಾಣಗಳನ್ನು ನಿರ್ಮಿಸಲಾಗಿದ್ದು, ಬಸ್ ನಿಲ್ದಾಣಗಳಲ್ಲಿ ಅಗತ್ಯವಾದ ಶೌಚಾಲಯಗಳನ್ನು ಹಾಗೂ ಇತರೆ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಒದಗಿಸಲಾಗಿರುತ್ತದೆ. ಸರ್ಕಾರದ ಬಂಡವಾಳ ವೆಚ್ಚದ ಯೋಜನೆಯಡಿಯಲ್ಲಿ 2023-24ನೇ ಸಾಲಿನ ಆಯವ್ಯಯದಲ್ಲಿ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗಾಗಿ ರೂ.30.36 ಕೋಟಿಗಳ ಅನುದಾನವನ್ನು ನಿಗದಿಪಡಿಸಲಾಗಿರುತ್ತದೆ.<br>**ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ**<br>ಸಂಸ್ಥೆಯ ಬಸ್ ನಿಲ್ದಾಣಗಳಲ್ಲಿ ಈಗಾಗಲೇ ಜಿಲ್ಲಾ ಕೇಂದ್ರ, ತಾಲ್ಲೂಕು, ಹೋಬಳಿ ಮತ್ತು ಗ್ರಾಮಾಂತರ ಬಸ್ ನಿಲ್ದಾಣಗಳಲ್ಲಿ ಪ್ರಯಾಣಿಕರಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸಲಾಗಿರುತ್ತದೆ. ಸರ್ಕಾರದ ಬಂಡವಾಳ ವೆಚ್ಚದ ಯೋಜನೆಯಡಿಯಲ್ಲಿ 2023-24ನೇ ಸಾಲಿನ ಆಯವ್ಯಯದಲ್ಲಿ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗಾಗಿ ರೂ.30.36 ಕೋಟಿಗಳ ಅನುದಾನವನ್ನು<br>**ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ**<br>ಸುಸಜ್ಜಿತ ಬಸ್ ನಿಲ್ದಾಣಗಳಿರುವ ಕಡೆ ಶೌಚಾಲಯಗಳ ಆಧುನೀಕರಣ/ಹೊಸ ಶೌಚಾಲಯಗಳನ್ನು ಅನುದಾನದ ಲಭ್ಯತೆ ಆಧರಿಸಿ, ನಿರ್ಮಿಸಲಾಗುತ್ತಿದೆ. ಸರ್ಕಾರದ ಬಂಡವಾಳ ವೆಚ್ಚದ ಯೋಜನೆಯಡಿಯಲ್ಲಿ 2023-24ನೇ ಸಾಲಿನ ಆಯವ್ಯಯದಲ್ಲಿ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗಾಗಿ ರೂ.11.38 ಕೋಟಿಗಳ ಅನುದಾನವನ್ನು ಒದಗಿಸಲಾಗುತ್ತಿದ್ದು, ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಕ್ರಿಯಾ ಯೋಜನೆಯಲ್ಲಿ ಅಳವಡಿಸಿಕೊಂಡು ಕ್ರಮ ಕೈಗೊಳ್ಳಲಾಗುತ್ತಿದೆ.<br>ಅಲ್ಲದೇ, ಸಾರಿಗೆ ಸಂಸ್ಥೆಗಳ ಬಸ್ ನಿಲ್ದಾಣಗಳಲ್ಲಿ ಶೌಚಾಲಯಗಳನ್ನು ಹಾಗೂ ಬಸ್ ನಿಲ್ದಾಣದ ಸ್ವಚ್ಛತೆಯನ್ನು ಟೆಂಡರ್ ಮೂಲಕ ಆಯ್ಕೆಯಾದ ಅರ್ಹ ಮತ್ತು ಅನುಭವವುಳ್ಳ ಖಾಸಗಿ ಗುತ್ತಿಗೆದಾರ/ಪರವಾನಗಿದಾರರ ಮೂಲಕ ಸಮರ್ಪಕವಾಗಿ ನಿರ್ವಹಿಸಲಾಗುತ್ತಿದೆ. |

ಸಂಖ್ಯೆ: ಟಿಡಿ 58 ಟಿಸಿಕ್ಯೂ 2024

**(ರಾಮಲಿಂಗಾರೆಡ್ಡಿ)**
ಸಾರಿಗೆ ಮತ್ತು ಮುಜರಾಯಿ ಸಚಿವರು